# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರವಿಕುಮಾರ್ ಎನ್ ರವರ ನಿಯಮ 330 ರ ಗಮನ ಸೆಳೆಯುವ ಸೂಚನೆಗೆ ಉತ್ತರ

**ಸೂಚನೆ:**

ಮೂಲ ಭೋವಿ ಜನಾಂಗದವರಿಗೆ ಪರಿಶಿಷ್ಟ ಜಾತಿ ಪ್ರಮಾಣಪತ್ರ ನೀಡಲು ಸಹಕಾರಿಯಾಗುವ ನಿಟ್ಟಿನಲ್ಲಿ ಶ್ರೀ ವಿ.ಎಸ್. ಉಗ್ರಪ್ಪನವರ ಅಧ್ಯಕ್ಷತೆಯಲ್ಲಿ 10 ಜನ ಶಾಸಕರನ್ನೊಳಗೊಂಡು ರಚಿಸಲಾದ ವಿಶೇಷ ಸದನ ಸಮಿತಿ ವರದಿಯನ್ನು ಯಥಾವತ್ತಾಗಿ ಅನುಷ್ಠಾನಗೊಳಿಸಲು ಹಾಗೂ ವರದಿಯ ಕುರಿತು ದಿನಾಂಕ:13.07.2017 ರಂದು ಹೊರಡಿಸಲಾಗಿರುವ ಗೊಂದಲಮಯ ಸುತ್ತೋಲೆಯನ್ನು ರದ್ದುಪಡಿಸಿ, ವರದಿಯಲ್ಲಿ ನಮೂದಿಸಲ್ಪಟ್ಟಿರುವ ಮುಖ್ಯಾಂಶವನ್ನೊಳಗೊಂಡ ಹೊಸ ಆದೇಶವನ್ನು ಹೊರಡಿಸುವ ಸಂಬಂಧ ಚರ್ಚೆ ನಡೆಸಲು ಅವಕಾಶ ಕಲ್ಪಿಸುವಂತೆ ಕೋರುತ್ತೇನೆ.

**ಉತ್ತರ:**

ಮೂಲ ಭೋವಿ ಜನಾಂಗದವರಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡಲು ಶ್ರೀ ವಿ.ಎಸ್. ಉಗ್ರಪ್ಪನವರ ಸಮಿತಿಯ ವರದಿಯಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ 113 ಎಸ್ಎಡಿ 2015, ದಿನಾಂಕ:13.07.2017 ರಲ್ಲಿ ಪರಿಶಿಷ್ಟ ಜಾತಿಯ ಪಟ್ಟಿಯ ಕ್ರ.ಸಂ.23 ರಲ್ಲಿರುವ ಭೋವಿ ಜಾತಿ ಸಮುದಾಯಗಳಿಗೆ ಸೂಕ್ತ ವಿಚಾರಣೆಯನ್ನು ನಡೆಸಿ ಸಕ್ಷಮ ಪ್ರಾಧಿಕಾರವು ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡಲು ಈಗಾಗಲೇ ಸುತ್ತೋಲೆಯನ್ನು ಹೊರಡಿಸಲಾಗಿದೆ. ಸದರಿ ಸುತ್ತೋಲೆಯನ್ವಯ ಜಾತಿ ಪ್ರಮಾಣ ಪತ್ರಗಳನ್ನು ಸಂಬಂಧಪಟ್ಟ ಪ್ರಾಧಿಕಾರಿಗಳು ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ನೈಜ ಭೋವಿ ಅರ್ಜಿದಾರರಿಗೆ ಜಾತಿ ಪ್ರಮಾಣ ಪತ್ರಗಳನ್ನು ನೀಡುತ್ತಿದ್ದಾರೆ.

ಸಂಖ್ಯೆ:SWD 21 SAD 2026

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು